ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಲೋಕೋಪಯೋಗಿ ಇಲಾಖೆಯ ಎಸ್. ಸಿ. ಪಿ. ಮತ್ತು ಟಿ. ಎಸ್. ಪಿ. ಕಾಮಗಾರಿಗಳ ಕುರಿತು

ಶ್ರೀ ರಘುನಾಥ್ ರಾವ್ ಮಲ್ಕಾಪೂರೆ(ವಿಧಾನಸಭೆಯಿಂದ ಚುನಾಯಿತರಾದವರು) -

1136 (1249) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕಳೆದ 3 ವರ್ಷಗಳಿಂದ ಲೋಕೋಪಯೋಗಿ ಇಲಾಖೆಯ ಎಸ್. ಸಿ. ಪಿ. ಮತ್ತು ಟಿ. ಎಸ್. ಪಿ ಯೋಜನೆಯಡಿಯಲ್ಲಿ ಬೀದರ್ ಜಿಲ್ಲೆಗೆ ಎಷ್ಟು ಅನುದಾನ ಮಂಜೂರು ಮಾಡಲಾಗಿದೆ;

(ಆ) ಮಂಜೂರಾದ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; (ಕಾಮಗಾರಿಯ ಸ್ಥಳ (ಗ್ರಾಮ), ಕಾಮಗಾರಿಗೆ ತಗುಲಿದ ವೆಚ್ಚ, ಕಾಮಗಾರಿ ನಿರ್ವಹಿಸಿದ ಗುತ್ತಿಗೆದಾರರ ಹೆಸರು, ವಿಧಾನ ಸಭಾ ಕ್ಷೇತ್ರವಾರು, ವರ್ಷವಾರು ಸಂಪೂರ್ಣ ವಿವರ ನೀಡುವುದು)

(ಇ) ಮಂಜೂರಾದ ಕಾಮಗಾರಿಗಳನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಕಾಲೋನಿಗಳಲ್ಲಿ ಕೈಗೊಳ್ಳದೇ ಬೇರೆ ಕಡೆ ಕೈಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರದಿಂದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗಿದೆಯೇ? (ಸ್ಪಷ್ಟ ಮಾಹಿತಿ ನೀಡುವುದು)